**All India Radio: Bangalore**
**National Bulletin In Kannada**
**12.05.2025 / 13.10 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**12.05.2025 / 13.10 hrs**

**<><*<><>*><>**

ಮುಖ್ಯಾಂಶಗಳು

೧. ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಉನ್ನತಮಟ್ಟದ ಸಭೆ

೨. ಅಂತಾರಾಷ್ಟ್ರೀಯ ದಾದಿಯರ ದಿನ; ದಾದಿಯರ ಯೋಗಕ್ಷೇಮ ದೇಶದ ಆರೋಗ್ಯ ವ್ಯವಸ್ಥೆಯ ಶಕ್ತಿ - ಕೇಂದ್ರ ಸಚಿವ ಜೆ ಪಿ ನಡ್ಡಾ

೩. ಭಾರತ - ಪಾಕಿಸ್ತಾನ ಉದ್ವಿಘ್ನತೆ ತಗ್ಗಿದ ಬೆನ್ನಲ್ಲೇ ೩೨ ವಿಮಾನ ನಿಲ್ದಾಣಗಳ ಕಾರ್ಯಾಚರಣೆ ಪುನರಾರಂಭ

೪. ಕ್ರಿಕೆಟ್ ಟೆಸ್ಟ್ ಮಾದರಿಯಿಂದ ನಿವೃತ್ತಿ ಘೋಷಿಸಿದ ವಿರಾಟ್ ಕೊಹ್ಲಿ

**<><*<><>*><>**

ನವದೆಹಲಿಯಲ್ಲಿರುವ ತಮ್ಮ ನಿವಾಸದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದಾರೆ.. ಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಮತ್ತು ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್.ಕೆ ತ್ರಿಪಾಠಿ ಹಾಗೂ ವಾಯುಪಡೆ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ಅಮರ್‌ಪ್ರೀತ್ ಸಿಂಗ್ ಭಾಗವಹಿಸಿದ್ದಾರೆ.

**<><*<><>*><>**

ಇಂದು ವಿಶ್ವದಾದ್ಯಂತ ಅಂತರಾಷ್ಟ್ರೀಯ ದಾದಿಯರ ದಿನವನ್ನು ಆಚರಿಸಲಾಗುತ್ತಿದೆ. ಆಧುನಿಕ ಶುಶ್ರೂಷೆಯ ಸಂಸ್ಥಾಪಕಿ ಫ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮ ದಿನಾಚರಣೆಯ ಸ್ಮರಣಾರ್ಥ ಅಂತರಾಷ್ಟ್ರೀಯ ದಾದಿಯರ ಮಂಡಳಿ-ಐಸಿಎನ್ ಮೇ ೧೨ ರಂದು ದಾದಿಯರ ದಿನವೆಂದು ಅಧಿಕೃತವಾಗಿ ಘೋಷಿಸಿದೆ. ನಮ್ಮ ದಾದಿಯರು ನಮ್ಮ ಭವಿಷ್ಯ ದಾದಿಯರನ್ನು ನೋಡಿಕೊಳ್ಳುವುದು ಆರ್ಥಿಕತೆಯನ್ನು ಬಲಪಡಿಸುತ್ತದೆ ಎಂಬುದು ಈ ವರ್ಷದ ಘೋಷವಾಕ್ಯ. ಜಗತ್ತಿನಾದ್ಯಂತ ಆರೋಗ್ಯ ವ್ಯವಸ್ಥೆಗಳನ್ನು ಬಲಪಡಿಸುವ ಮತ್ತು ಅವರ ಆರೋಗ್ಯ ಮತ್ತು ಯೋಗಕ್ಷೇಮವನ್ನು ಬೆಂಬಲಿಸುವ ಅಗತ್ಯ ಕುರಿತು ಗಮನಸೆಳೆಯುವುದು ಇದರ ಉದ್ದೇಶವಾಗಿದೆ. ಐಸಿಎನ್ ಅಧ್ಯಕ್ಷೆ ಪಮೇಲ ಸಿಸ್ರಿಯೊನೋ ತಮ್ಮ ಸಂದೇಶದಲ್ಲಿ ದಾದಿರರು ಪ್ರತಿನಿತ್ಯ ರೋಗಗಳ ಆರೈಕೆ ಮತ್ತು ಕ್ಲಿಷ್ಟಕರ ಸಂದರ್ಭಗಳನ್ನು ನಿಭಾಯಿಸುವಲ್ಲಿ ನಿಮ್ಮ ಬದ್ಧತೆಯು ಶ್ಲಾಘನೀಯ ಎಂದಿದ್ದಾರೆ. ವಿಶ್ವ ಆರೋಗ್ಯ ಸಂಸ್ಥೆಯೂ ಕೂಡ ವಿಶ್ವ ದಾದಿಯರ ದಿನದಂದು ಶುಭಾಶಯ ಕೋರಿದ್ದು, ಅವರು ವಿಶ್ವ ಆರೋಗ್ಯ ವ್ಯವಸ್ಥೆಯ ಹೃದಯವೆಂದು ಬಣ್ಣಿಸಿದೆ.

<><*<><>*><>

ದಾದಿಯರ ಯೋಗಕ್ಷೇಮ ದೇಶದ ಆರೋಗ್ಯ ವ್ಯವಸ್ಥೆಯ ಶಕ್ತಿಯಾಗಿದ್ದು, ರಾಷ್ಟ್ರ ಬೆಳವಣಿಗೆಗೆ ನೇರವಾಗಿ ಸಂಬಂಧಿಸಿದ್ದಾಗಿದೆ ಎಂದು ಆರೋಗ್ಯ ಸಚಿವ ಜೆ ಪಿ ನಡ್ಡಾ ಹೇಳಿದ್ದಾರೆ. ಸಾರ್ವಜನಿಕ ಪೋಸ್ಟ್‌ನಲ್ಲಿ ಅಂತಾರಾಷ್ಟ್ರೀಯ ದಾದಿಯರ ದಿನದಂದು ದಾದಿಯರು ತೋರುವ ಸಹಾನುಭೂತಿ ಶಕ್ತಿ ಮತ್ತು ಬದ್ಧತೆಗೆ ಗೌರವ ಸೂಚಿಸಿರುವ ಅವರು, ದಾದಿಯರಲ್ಲಿ ಹೂಡಿಕೆ ಮಾಡುವುದೆಂದರೆ ಆರೋಗ್ಯಕರ ಸಮಾಜ, ಉತ್ಪಾದಕ ಸಮುದಾಯ ಮತ್ತು ಸಧೃಡ ಭವಿಷ್ಯದಲ್ಲಿ ಹೂಡಿಕೆ ಮಾಡಿದಂತೆ ಎಂದಿದ್ದಾರೆ.

<><*<><>*><>

ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತ ಆಪರೇಷನ್ ಸಿಂಧೂರ್ ಮೂಲಕ ಇಡೀ ಜಗತ್ತಿಗೆ ನಿರ್ಣಯ ಸಂದೇಶ ನೀಡಿದೆ ಎಂದು ಬಿಜೆಪಿ ತಿಳಿಸಿದೆ. ನವದೆಹಲಿಯ ಪಕ್ಷದ ಪ್ರಧಾನ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಬಿಜೆಪಿ ವಕ್ತಾರ ಸಂಬಿತ್ ಪಾತ್ರ. ಪಾಕಿಸ್ತಾನವನ್ನು ಪ್ರತ್ಯೇಕಿಸುವ ಮತ್ತು ಭಯೋತ್ಪಾದನೆಯನ್ನು ಎದುರಿಸುವ ಬಗ್ಗೆ ಒಮ್ಮತ ಮೂಡಿಸುವ ಪ್ರಧಾನಿ ನರೇಂದ್ರ ಮೋದಿ, ಸುಮಾರು ೨೦ ದೇಶಗಳೊಂದಿಗೆ ತೊಡಗಿಸಿಕೊಂಡಿದ್ದಾರೆ. ಸೌದಿ ಅರೇಬಿಯಾ, ಯುಎಇ, ಅಮೆರಿಕಾ ಮತ್ತು ಹಲವು ಇಸ್ಲಾಂ ರಾಷ್ಟ್ರಗಳು ಭಾರತದ ನಿಲುವಿಗೆ ಬೆಂಬಲ ಸೂಚಿಸಿವೆ ಎಂದರು. ಪಹಲ್ಗಾಮ್ ದಾಳಿಯ ಬಳಿಕ ಪ್ರಧಾನಿ ನರೇಂದ್ರ ಮೋದಿ ೨೬ ಜನರ ಸಾವಿಗೆ ಪ್ರತಿಕಾರ ತೀರಿಸುವ ಭರವಸೆ ನೀಡಿದ್ದರು. ಭಾರತೀಯ ಸೇನೆ ಆಪರೇಷನ್ ಸಿಂಧೂರ್ ಮೂಲಕ ಅಪ್ರತಿಮ ಧೈರ್ಯ ತೋರಿದ್ದು, ಅದರ ಯಶಸ್ಸಿಗೆ ಪ್ರತಿಯೊಬ್ಬ ಭಾರತೀಯ ನಾಗರಿಕ ಭಾರತೀಯ ಸೇನೆ ವಾಯುಪಡೆ ಮತ್ತು ನೌಕಾ ಪಡಗೆ ಕೃತಜ್ಞತೆ ಸಲ್ಲಿಸಿದ್ದಾನೆ ಎಂದು ಸಂಬಿತ್ ಪಾತ್ರ ಹೇಳಿದರು.

ಧ್ವನಿ: ಸಂದೀಪ್ ಪಾತ್ರ ( ೩೫ ಸೆಕೆಂಡ್ಸ್)

<><*<><>*><>

ದೇಶಾದ್ಯಂತ ಇಂದು ಬುದ್ಧ ಪೂರ್ಣಿಮೆ ಆಚರಿಸಲಾಗುತ್ತಿದೆ. ಇದು ಗೌತಮ ಬುದ್ಧ ಜನಿಸಿದ ದಿನ ಮಾತ್ರವಲ್ಲದೆ, ಬೋಧ್ ಗಯಾದಲ್ಲಿ ಮಹಾಬೋಧಿ ವೃಕ್ಷದ ಕೆಳಗೆ ಅವರು ನಿರ್ವಾಣ ಹೊಂದಿದ ದಿನವನ್ನೂ ಸಹ ಗುರುತಿಸುತ್ತದೆ. ಈ ದಿನವನ್ನು ಪ್ರಪಂಚದಾದ್ಯಂತ ಬೌದ್ಧರು ಮತ್ತು ಹಿಂದೂಗಳು ಸಂಭ್ರಮದಿಂದ ಆಚರಿಸುತ್ತಾರೆ. ಭಾರತ, ನೇಪಾಳ, ಭೂತಾನ್, ಮ್ಯಾನ್ಮಾರ್, ಥೈಲ್ಯಾಂಡ್, ಟಿಬೆಟ್, ಕೊರಿಯಾ, ಲಾವೋಸ್, ವಿಯೆಟ್ನಾಂ, ಮಂಗೋಲಿಯಾ, ಕಾಂಬೋಡಿಯಾ, ಸಿಂಗಾಪುರ್, ಇಂಡೋನೇಷ್ಯಾ ಮತ್ತು ಶ್ರೀಲಂಕಾದಂತಹ ದೇಶಗಳಲ್ಲಿ ಇದು ಒಂದು ಪ್ರಮುಖ ಹಬ್ಬವಾಗಿದೆ.

<><*<><>*><>

ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ೩೨ ವಿಮಾನ ನಿಲ್ದಾಣಗಳಲ್ಲಿ ಕಾರ್ಯಾಚರಣೆಯನ್ನು ಪುನರಾರಂಭಿಸಿದೆ. ಭಾರತ- ಪಾಕಿಸ್ತಾನ ನಡುವಿನ ದ್ವಿಘ್ನ ಪರಿಸ್ಥಿತಿಯ ಹಿನ್ನೆಲೆ ಈ ಹಿಂದೆ ನಾಗರಿಕ ವಿಮಾನಗಳನ್ನು ೧೫ ರ ಬೆಳಿಗ್ಗೆ ೫:೨೯ ರವರೆಗೆ ಮುಚ್ಚಲಾಗಿತ್ತು. ಕಾರ್ಯಾಚರಣೆಗಳು ತಕ್ಷಣದಿಂದಲೇ ಪುನರಾರಂಭಗೊಂಡಿವೆ. ಪ್ರಯಾಣಿಕರಿಗೆ, ವಿಮಾನಯಾನ ಸಂಸ್ಥೆಗಳೊಂದಿಗೆ ವಿಮಾನ ಸ್ಥಿತಿಯನ್ನು ಪರಿಶೀಲಿಸಲು ಮತ್ತು ವಿಮಾನಯಾನ ಜಾಲತಾಣಗಳಲ್ಲಿ ಹೆಚ್ಚಿನ ಮಾಹಿತಿಯನ್ನು ಪಡೆಯಲು ಸೂಚಿಸಲಾಗಿದೆ.

<><*<><>*><>

ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರು, ಎರಡೂ ರಾಷ್ಟ್ರಗಳ ನಡುವೆ ನಡೆಯುತ್ತಿರುವ ಸಂಘರ್ಷವನ್ನು ಕೊನೆಗೊಳಿಸಲು ಟರ್ಕಿಯಲ್ಲಿ, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಚರ್ಚೆ ನಡೆಸಲು ಇಚ್ಛೆ ವ್ಯಕ್ತಪಡಿಸಿದ್ದಾರೆ. ಇಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅಧ್ಯಕ್ಷ ಝೆಲೆನ್ಸ್ಕಿ, ಯುದ್ಧವನ್ನು ಕೊನೆಗೊಳಿಸಲು ಮಾತನಾಡಲು ಸಿದ್ಧರಿರುವುದಾಗಿ ಹೇಳಿದ್ದಾರೆ. ಗುರುವಾರ ಟರ್ಕಿಯಲ್ಲಿ ನಡೆಯಬಹುದಾದ ರಷ್ಯಾದ ಅಧ್ಯಕ್ಷ ಪುಟಿನ್ ಪ್ರಸ್ತಾಪಿಸಿದ ಮಾತುಕತೆಗಳಿಗೆ ತಕ್ಷಣ ಒಪ್ಪಿಕೊಳ್ಳುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಉಕ್ರೇನ್‌ಗೆ ಕರೆ ನೀಡಿದ ನಂತರ ಈ ಹೇಳಿಕೆ ಬಂದಿದೆ.

<><*<><>*><>

ಪಾಕಿಸ್ತಾನದಿಂದ ಕದನ ವಿರಾಮ ಮತ್ತು ವಾಯು ಪ್ರದೇಶ ಉಲ್ಲಂಘನೆ ನಂತರ ಕಳೆದ ರಾತ್ರಿ ಪಶ್ಚಿಮ ಗಡಿಗಳ ಸೇನಾ ಕಮಾಂಡರ್‌ಗಳೊಂದಿಗೆ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಭದ್ರತಾ ಪರಿಸ್ಥಿತಿ ಪರಿಶೀಲಿಸಿದರು. ನಿನ್ನೆ ಮಿಲಿಟರಿ ಕಾರ್ಯಾಚರಣೆಗಳ ಮಹಾ ನಿರ್ದೇಶಕರ ಮಾತುಕತೆಗಳ ನಂತರ ತಲುಪಿರುವ ಯಾವುದೇ ಒಪ್ಪಂದದ ಉಲ್ಲಂಘನೆಯ ವಿರುದ್ಧ ಪ್ರತಿ ದಾಳಿ ನಡೆಸಲು ಸೇನಾ ಮುಖ್ಯಸ್ಥರು, ಸೇನಾ ಕಮಾಂಡರ್‌ಗಳಿಗೆ ಸಂಪೂರ್ಣ ಅಧಿಕಾರಿ ನೀಡಿದ್ದಾರೆ ಎಂದು ಭಾರತೀಯ ಸೇನೆ ತಿಳಿಸಿದೆ.

<><*<><>*><>

ಛತ್ತೀಸ್‌ಗಡದ ರಾಜಧಾನಿ ರಾಯ್‌ಪುರದ ಸಮೀಪ ನಿನ್ನೆ ರಾತ್ರಿ ಟ್ರಕ್‌ಗಳ ನಡುವೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಕನಿಷ್ಠ ೧೩ ಮಂದಿ ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ೯ ಮಹಿಳೆಯರು ಹಾಗೂ ೪ ಮಕ್ಕಳು ಮೃತಪಟ್ಟಿದ್ದು, ೧೩ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ. ಗಾಯಾಳುಗಳಿಗೆ ಸಮೀಪದ ವೈದ್ಯಕೀಯ ಕಾಲೇಜು ಆಸ್ಪತ್ರೆ ಹಾಗೂ ಸಮುದಾಯ ಆರೋಗ್ಯ ಭವನದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

<><*<><>*><>

ಹದಿನಾಲ್ಕು ವರ್ಷಗಳ ಅಭೂತಪೂರ್ವ ಪಯಣದ ಬಳಿಕ ಭಾರತೀಯ ಕ್ರಿಕೆಟ್ ತಂಡದ ಮಾಜಿ ನಾಯಕ ವಿರಾಟ್ ಕೊಹ್ಲಿ ಟೆಸ್ಟ್ ಮಾದರಿಯಿಂದ ನಿವೃತ್ತಿ ಘೋಷಿಸಿದ್ದಾರೆ. ಆಧುನಿಕ ಕ್ರಿಕೆಟ್‌ನ ಶ್ರೇಷ್ಠ ಆಟಗಾರ ಎಂದು ಪರಿಗಣಿಸಲ್ಪಡುವ ವಿರಾಟ್ ಕೊಹ್ಲಿ ತಮ್ಮ ನಿವೃತ್ತಿ ಕುರಿತಂತೆ ಸಾಮಾಜಿಕ ಮಾಧ್ಯಮಗಳಲ್ಲಿ ಘೋಷಿಸಿದ್ದಾರೆ. ಆ ಮೂಲಕ ಭಾರತೀಯ ಟೆಸ್ಟ್ ಮಾದರಿಯಲ್ಲಿ ಒಂದು ಯುಗದ ಅಂತ್ಯವಾಗಿದೆ. ಟೆಸ್ಟ್ ಮಾದರಿಯ ೧೨೩ ಪಂದ್ಯಗಳಲ್ಲಿ ೪೬.೮೫ ಸರಾಸರಿಯಲ್ಲಿ ವಿರಾಟ್ ಕೊಹ್ಲಿ ೯ ಸಾವಿರದ ೨೩೦ ರನ್ ಗಳಿಸಿದ್ದಾರೆ. ತಮ್ಮ ಟೆಸ್ಟ್ ವೃತ್ತಿ ಜೀವನದಲ್ಲಿ, ಅವರು ೪ನೇ ಅತೀ ಹೆಚ್ಚು ರನ್ ಆಟಗಾರರಾಗಿದ್ದಾರೆ. ೨೦೧೧ರಲ್ಲಿ ಟೆಸ್ಟ್ ಮಾದರಿಗೆ ಪಾದರ್ಪಣೆ ಮಾಡಿದ ಅವರು, ಶೇಕಡ ೫೮.೮೨ರಷ್ಟು ಗೆಲುವಿನ ಪ್ರಮಾಣದೊಂದಿಗೆ ೬೮ ಟೆಸ್ಟ್ ಪಂದ್ಯಗಳಲ್ಲಿ ಭಾರತೀಯ ತಂಡವ ನೇತೃತ್ವವನ್ನು ವಹಿಸಿದ್ದರು. ಇವುಗಳಲ್ಲಿ ಭಾರತೀಯ ತಂಡ ೪೦ ಜಯ ೧೧ ಡ್ರಾ ಹಾಗೂ ೧೭ ಸೋಲು ದಾಖಲಿಸಿದೆ ೨೦೨೪ರ ಟಿ-೨೦ ವಿಶ್ವಕಪ್ ಬಳಿಕ ಕೊಹ್ಲಿ ಈಗಾಗಲೆ ಟಿ-೨೦ ಮಾದರಿಯಿಂದ ನಿವೃತ್ತಿ ಘೋಷಿಸಿದ್ದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ <>*><>**